# All India Radio: Bangalore
# Regional Bulletin In Kannada
# 30.04.2025 / 2.30 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

ಮುಖ್ಯಾಂಶಗಳು

೧.	ಪಾಕಿಸ್ತಾನ ಪರ ಯಾರೇ ಘೋಷಣೆ ಕೂಗಿದರು ದೇಶದ್ರೋಹ - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

೨.	ನಾಡಿನೆಲ್ಲೆಡೆ ಇಂದು ಬಸವಜಯಂತಿ ಸಂಭ್ರಮ; ಪ್ರಧಾನಿ, ಮುಖ್ಯಮಂತ್ರಿ ಸೇರಿದಂತೆ ಗಣ್ಯರಿಂದ ಸ್ಮರಣೆ

೩.	ಮುಂಬೈನಲ್ಲಿ ನಾಳೆಯಿಂದ ವಿಶ್ವ ಶ್ರವಣ ದೃಶ್ಯ ಮತ್ತು ಮನರಂಜನಾ ಶೃಂಗಸಭೆ

೪.	ಬೃಹತ್ ಬೆಂಗಳೂರು ಪಾಲಿಕೆಯ ಮುಖ್ಯ ಆಯುಕ್ತರಾಗಿ ಮಹೇಶ್ವರ್ ರಾವ್ ಇಂದು ಅಧಿಕಾರ ಸ್ವೀಕಾರ

*****************

ಪಾಕಿಸ್ತಾನ ಪರ ಘೋಷಣೆ ಕೂಗುವುದು ಹಾಗೂ ಯಾರೇ ಮಾತನಾಡಿದರೂ ಅದು ದೇಶದ್ರೋಹ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಾಕಿಸ್ತಾನ್ ಜಿಂದಾಬಾದ್ ಎಂದು ಘೋಷಣೆ ಕೂಗಿರುವ ಪ್ರಕರಣದಲ್ಲಿ ೧೫ ಜನರ ಮೇಲೆ ಪ್ರಕರಣ ದಾಖಲಾಗಿದ್ದು, ತನಿಖೆ ನಡೆಯುತ್ತಿದೆ ಎಂದು ಹೇಳಿದ್ದಾರೆ. ವರದಿ ಬಂದ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

*****************

ಮಂಗಳೂರಿನಲ್ಲಿ ಪಾಕಿಸ್ತಾನ ಪರ ಘೋಷಣೆ ಕೂಗಿದ ವ್ಯಕ್ತಿಯೊಬ್ಬನ ಹತ್ಯೆ ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ನಡೆಯುತ್ತಿದೆ ಎಂದು ಗೃಹ ಸಚಿವ ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾತನಾಡಿದ ಅವರು, ಪ್ರಕರಣಕ್ಕೆ ಸಂಬಂಧಿಸಿದಂತೆ ೧೫ ಜನರನ್ನು ಬಂಧಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

*****************

ಹನ್ನೆರಡನೆಯ ಶತಮಾನದ ಸಮಾಜ ಸುಧಾರಕ, ತತ್ವಶಾಸ್ತ್ರಜ್ಞ, ಅನುಭವ ಮಂಟಪದ ಮೂಲಕ ಸಮಾನತೆಗಳನ್ನು ಪ್ರತಿಪಾದಿಸಿ ವಚನಗಳ ಮೂಲಕ ಅರಿವಿನ ಬೆಳಕನ್ನು ಮೂಡಿಸಿದ ಮಹಾನ್ ಚೇತನ ಬಸವಣ್ಣನವರ ಜಯಂತಿಯನ್ನು ಇಂದು ಎಲ್ಲೆಡೆ ಆಚರಿಸಲಾಗುತ್ತಿದೆ.

ಬಸವ ಜಯಂತಿ ಹಿನ್ನಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ, ಜಗದ್ಗುರು ಬಸವೇಶ್ವರರ ಆಧ್ಯಾತ್ಮಿಕ ಜ್ಞಾನವನ್ನು ಸ್ಮರಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಪ್ರಧಾನಿ, ಸಮಾಜದ ಏಳಿಗೆ ಬಗ್ಗೆ ಬಸವಣ್ಣನವರ ದೃಷ್ಟಿಕೋನ ಜನರಿಗೆ ಮಾರ್ಗದರ್ಶನ ನೀಡುತ್ತಲೇ ಇವೆ ಎಂದು ಹೇಳಿದ್ದಾರೆ.

ಕೇಂದ್ರ ಸಚಿವರಾದ ಅಶ್ವಿನಿ ವೈಷ್ಣವ್, ಕಿರಣ್ ರಿಜಿಜು, ಪ್ರಹ್ಲಾದ್ ಜೋಶಿ, ಶೋಭಾ ಕರಂದ್ಲಾಜೆ ಮತ್ತು ಬಿಜೆಪಿ ಸಂಸದ ತೇಜಸ್ವಿ ಸೂರ್ಯ ಸೇರಿದಂತೆ ಹಲವು ನಾಯಕರು ಸಂಸತ್ ಭವನದ ಸಂಕೀರ್ಣದಲ್ಲಿಂದು ಗುರು ಬಸವೇಶ್ವರರಿಗೆ ಪುಷ್ಪ ನಮನ ಸಲ್ಲಿಸಿದರು. ಇಂದು ಬಸವಣ್ಣನವರನ್ನು ಸ್ಮರಿಸುವುದು ಪ್ರತಿಯೊಬ್ಬ ಕನ್ನಡಿಗರ ಹಾಗೂ ಭಾರತೀಯನ ಕರ್ತವ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಬಸವ ಸಮಿತಿ ಆಯೋಜಿಸಿದ್ದ ಬಸವ ಜಯಂತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ನಾಡಿನ ಜನತೆಗೆ ಬಸವ ಜಯಂತಿಯ ಶುಭಾಶಯ ತಿಳಿಸಿದ್ದಾರೆ. ಬಳಿಕ ಅವರು, ವಿಧಾನಸೌಧದ ಪೂರ್ವ ಭಾಗದಲ್ಲಿರುವ ಬಸವಣ್ಣನವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಪುಷ್ಪನಮನ ಸಲ್ಲಿಸಿದರು. ಬುದ್ಧ, ಬಸವ, ಅಂಬೇಡ್ಕರ್ ತತ್ವ-ಸಿದ್ಧಾಂತಗಳು ಎಲ್ಲ ಕಾಲ್ಲಕ್ಕೂ ಶ್ರೇಷ್ಠ ಎಂದು ವಿಧಾನಪರಿಷತ್ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಹೇಳಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ "ಜಗನ್ನಾಥ ಭವನ"ದಲ್ಲಿ ಇಂದು ಬಸವಣ್ಣನವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿದ ಅವರು ಮಾತನಾಡಿದರು. ಬಸವ ಜಯಂತಿಯ ಪ್ರಯುಕ್ತ ವಿಜಯಪುರ ಜಿಲ್ಲೆಯ ಬಸವನ ಬಾಗೇವಾಡಿಯ ಬಸವ ಸ್ಮಾರಕದಲ್ಲಿ ಬಾಲ ಬಸವನಿಗೆ ನಾಮಕರಣ ಶಾಸ್ತ್ರ ಮಾಡಲಾಯಿತು.

ಜಗತ್ತಿನ ಮೊದಲ ಸಂಸತ್ತು ಅನುಭವ ಮಂಟಪ ಎಂದು ತುಮಕೂರು ಜಿಲ್ಲೆಯ ಅಪರ ಜಿಲ್ಲಾಧಿಕಾರಿ ಡಾ.ತಿಪ್ಪೇಸ್ವಾಮಿ ತಿಳಿಸಿದ್ದಾರೆ. ಜಾತಿ, ಮತ, ಲಿಂಗ ಭೇದವಿಲ್ಲದೆ ಎಲ್ಲ ಸಮುದಾಯವರಿಗೂ ತಮ್ಮ ನೋವು, ನಲಿವುಗಳನ್ನು ಅಭಿವ್ಯಕ್ತಿಗೊಳಿಸಲು ಅವಕಾಶವಿದ್ದ ಮೊದಲ ವೇದಿಕೆ ಅನುಭವ ಮಂಟಪ ಎಂದು ಹೇಳಿದ್ದಾರೆ.

೯೦೦ ವರ್ಷಗಳ ಹಿಂದೆಯೇ ಜಾತಿ, ವರ್ಣ ಹಾಗೂ ಲಿಂಗಭೇದಗಳನ್ನು ವಿರೋಧಿಸಿದ ಬಸವಣ್ಣ ಆಲೋಚನೆಗಳು ಕಾಂತ್ರಿಕಾರಿಯಾಗಿದ್ದವು ಎಂದು ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಸಿಇಒ ಎಸ್.ಜೆ.ಸೋಮಶೇಖರ್ ಅಭಿಪ್ರಾಯಪಟ್ಟಿದ್ದಾರೆ. ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಪ್ರತಿಯೊಬ್ಬರು ತಮ್ಮ ಮನಗಳಲ್ಲಿ ಬಸವಣ್ಣನವರ ತತ್ವಗಳನ್ನು ಅನಾವರಣ ಮಾಡಿಕೊಳ್ಳಬೇಕು ಎಂದು ಕರೆ ನೀಡಿದ್ದಾರೆ.

ಕರ್ನಾಟಕದ ಸಾಂಸ್ಕೃತಿಕ ನಾಯಕ, ಕ್ರಾಂತಿಯೋಗಿ ಬಸವೇಶ್ವರರ ಜಯಂತಿಯನ್ನು ಬೆಂಗಳೂರು ಗ್ರಾಮಾಂತರ ಜಿಲ್ಲೆಯಾದ್ಯಂತ ಆಚರಿಸಲಾಯಿತು. ದಾವಣಗೆರೆ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿಂದು ವಿಶ್ವ ಗುರು ಬಸವೇಶ್ವರ ಜಯಂತಿಯನ್ನು ಆಚರಿಸಲಾಯಿತು. ಜಿಲ್ಲಾಧಿಕಾರಿ ಡಾ.ಗಂಗಾಧರ ಸ್ವಾಮಿ ಬಸವೇಶ್ವರರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿ, ಬಸವಣ್ಣನ ವಚನಗಳ ಆಶಯದಂತೆ ಪ್ರತಿಯೊಬ್ಬರ ಬದುಕು ರೂಪುಗೊಳ್ಳಬೇಕೆಂದು ಕರೆ ನೀಡಿದರು.

*****************

ರಾಷ್ಟ್ರೀಯ ಹೆದ್ದಾರಿಯ ಶಿರೂರು ಬಳಿ ಸಂಭವಿಸಿದ್ದ ಗುಡ್ಡ ಕುಸಿತದಿಂದಾಗಿ ಗಂಗಾವಳಿ ನದಿಯಲ್ಲಿ ಶೇಖರಗೊಂಡಿರುವ ಮಣ್ಣು ತೆರವು ಕಾರ್ಯವನ್ನು ಕೈಗೊಳ್ಳುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ ಮತ್ತು ಬಂದರು ಇಲಾಖೆಯ ಅಧಿಕಾರಿಗಳಿಗೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯ ಸೂಚನೆ ನೀಡಿದ್ದಾರೆ. ಕಾರವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನಿಗಧಿತ ಅವಧಿಯೊಳಗೆ ಮಣ್ಣು ತೆರವು ಕಾರ್ಯ ಪೂರ್ಣಗೊಳಿಸುವಂತೆ ನಿರ್ದೇಶನ ನೀಡಿದ್ದಾರೆ. ನದಿಯಿಂದ ತೆರವುಗೊಳಿಸುವ ಮಣ್ಣನ್ನು ನಿಯಮಾವಳಿಗಳಂತೆ ಸೂಕ್ತ ರೀತಿಯಲ್ಲಿ ವಿಲೇವಾರಿ ಮಾಡಬೇಕು. ಗಣಿ ಮತ್ತು ಭೂ ವಿಜ್ಞಾನ ಇಲಾಖೆಯ ಅಧಿಕಾರಿಗಳಿಗೆ ಮತ್ತು ತೆರವು ಕಾರ್ಯಚರಣೆಗೆ ಎಲ್ಲಾ ರೀತಿಯ ಅಗತ್ಯ ಸಹಕಾರ ನೀಡುವಂತೆ ಬಂದರು ಇಲಾಖೆಯ ಅಧಿಕಾರಿಗಳಿಗೆ ತಿಳಿಸಿದ್ದಾರೆ.

*****************

ವಿಶ್ವ ಶ್ರವಣ, ದೃಶ್ಯ ಮತ್ತು ಮನರಂಜನಾ ಶೃಂಗಸಭೆ-ವೇವ್ಸ್ ನಾಳೆ ಮುಂಬೈನ ಜಿಯೋ ವರ್ಲ್ಡ್ ಕನ್ವೆನ್ಷನ್ ಸೆಂಟರ್‌ನಲ್ಲಿ ಪ್ರಾರಂಭವಾಗಲಿದೆ. ನಾಲ್ಕು ದಿನಗಳ ಕಾಲ ನಡೆಯಲಿರುವ ಈ ಶೃಂಗಸಭೆಯು, ಶ್ರವಣ-ದೃಶ್ಯ ಮತ್ತು ಮನರಂಜನಾ ಉದ್ಯಮದ ಭವಿಷ್ಯದ ಕುರಿತು ಚರ್ಚೆಗಳಿಗೆ ಜಾಗತಿಕ ವೇದಿಕೆಯನ್ನು ಒದಗಿಸಲಿದೆ. ಜಾಗತಿಕ ಮಾಧ್ಯಮ ಸಂವಾದಗಳು, ಖರೀದಿದಾರರು ಮತ್ತು ಮಾರಾಟಗಾರರ ನಡುವಿನ ಭೇಟಿಗಳು, ಉದಯೋನ್ಮುಖ ಪ್ರತಿಭೆಗಳ ಮತ್ತು ಹೊಸ ತಲೆಮಾರಿನ ಕಥನ ಶೈಲಿಗಳ ಪ್ರದರ್ಶನಗಳಿಗೆ ವೇದಿಕೆಯಾಗಿ ಶೃಂಗಸಭೆ ಕಾರ್ಯನಿರ್ವಹಿಸಲಿದೆ.

ವೇವ್ಸ್ ಶೃಂಗಸಭೆಯು, ಭಾರತದ ಮನರಂಜನೆ ಮತ್ತು ಸೃಜನಶೀಲತೆಯ ಅಗಾಧ ಸಾಮರ್ಥ್ಯವನ್ನು ಜಗತ್ತಿಗೆ ಪ್ರದರ್ಶಿಸಲು ಗಮನಾರ್ಹ ಅವಕಾಶವನ್ನು ಒದಗಿಸಲಿದೆ. ನಾಳೆಯಿಂದ ಪ್ರಾರಂಭವಾಗುವ ನಾಲ್ಕು ದಿನಗಳ ಈ ಕಾರ್ಯಕ್ರಮವು, ವಿಶ್ವದ ಉನ್ನತ ಮಾಧ್ಯಮ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಪ್ರಮುಖ ಮನರಂಜನಾ ರಾಯಭಾರಿ ಮತ್ತು ಜಗತ್ತಿನಾದ್ಯಂತದ ಸೃಜನಶೀಲರನ್ನು ಒಟ್ಟುಗೂಡಿಸುತ್ತದೆ. ನೂರು ದೇಶಗಳಿಂದ ಸುಮಾರು ಐದು ಸಾವಿರ ಪ್ರತಿನಿಧಿಗಳು ಶೃಂಗಸಭೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಮನರಂಜನಾ ನವೋದ್ಯಮಗಳು ತಮ್ಮ ಆಲೋಚನೆಗಳನ್ನು ಜಾಗತಿಕ ಪ್ರೇಕ್ಷಕರಿಗೆ ಪ್ರಸ್ತುತಪಡಿಸಲು ಮತ್ತು ಹೂಡಿಕೆದಾರರು ಮತ್ತು ಉದ್ಯಮದ ನಾಯಕರೊಂದಿಗೆ ಸಂಪರ್ಕ ಸಾಧಿಸಲು ಅವಕಾಶವನ್ನು ಒದಗಿಸುತ್ತದೆ.

ಚಲನಚಿತ್ರರಂಗದ ಪ್ರಸಿದ್ಧ ನಟರಾದ ಅಮಿತಾಬ್ ಬಚ್ಚನ್, ರಜನಿಕಾಂತ್, ಚಿರಂಜೀವಿ, ಮೋಹನ್ ಲಾಲ್, ನಾಗಾರ್ಜುನ, ಶಾರುಖ್ ಖಾನ್, ಅನಿಲ್ ಕಪೂರ್, ಅಕ್ಷಯ್ ಕುಮಾರ್ ಮತ್ತು ಅಮೀರ್ ಖಾನ್ ಸೇರಿದಂತೆ ಹಲವು ಕಲಾವಿದರು ಈ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

*****************

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ನೂತನ ಆಡಳಿತಾಧಿಕಾರಿಯಾಗಿ ತುಷಾರ್ ಗಿರಿನಾಥ್ ಹಾಗೂ ಮುಖ್ಯ ಆಯುಕ್ತರಾಗಿ ಮಹೇಶ್ವರ್ ರಾವ್ ನೇಮಕಗೊಂಡಿದ್ದಾರೆ. ಇಂದು ಮಧ್ಯಾಹ್ನ ಬಿಬಿಎಂಪಿ ಕೇಂದ್ರ ಕಛೇರಿಯಲ್ಲಿ ಇಬ್ಬರು ಅಧಿಕಾರಿಗಳು ಅಧಿಕಾರ ಸ್ವೀಕರಿಸಲಿದ್ದಾರೆ.

ಬಿಬಿಎಂಪಿ ಮುಖ್ಯ ಆಯುಕ್ತರಾಗಿದ್ದ ತುಷಾರ್ ಗಿರಿನಾಥ್ ಅವರನ್ನು ನಗರಾಭಿವೃದ್ಧಿ ಇಲಾಖೆ ಹಾಗೂ ಗೃಹ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿಯಾಗಿ ನೇಮಕ ಮಾಡಲಾಗಿದೆ. ಮಹೇಶ್ವರ್ ರಾವ್ ಅವರು ಬಿಎಂಆರ್‌ಸಿಎಲ್ ವ್ಯವಸ್ಥಾಪಕ ನಿರ್ದೇಶಕರಾಗಿದ್ದು, ಅವರಿಗೆ ಬಿಬಿಎಂಪಿ ಮುಖ್ಯ ಆಯುಕ್ತರಾಗಿ ಹೆಚ್ಚುವರಿ ಜವಾಬ್ದಾರಿ ನೀಡಲಾಗಿದೆ.

*****************

ಸರ್ಕಾರದಿಂದ ಇದುವರೆಗೆ ಮಂಜೂರಾದ ಎಲ್ಲ ಬಗೆಯ ಜಮೀನುಗಳ ಪೋಡಿ ಅಭಿಯಾನವನ್ನು ದಕ್ಷಿಣ ಕನ್ನಡ ಜಿಲ್ಲಾಡಳಿತ ಕೈಗೆತ್ತಿಕೊಂಡಿದೆ. ಇದಕ್ಕಾಗಿ ಹೊರ ಜಿಲ್ಲೆಗಳಿಂದ ೫೦ ಮಂದಿ ಪರವಾನಗಿ ಹೊಂದಿದ ಸರ್ವೇಯರ್‌ಗಳನ್ನು ಕರೆಸಿಕೊಳ್ಳಲಾಗಿದೆ ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಮುಲ್ಲೈ ಮುಗಿಲನ್ ತಿಳಿಸಿದ್ದಾರೆ.
ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಮೀನಿನ ದಾಖಲೆಗಳಿಗೆ ಸಂಬಂಧಿಸಿದಂತೆ ಅತ್ಯಂತ ಉಪಯುಕ್ತವಾಗಲಿರುವ ಈ ಪೋಡಿ ಕಾರ್ಯಕ್ಕೆ ಸಾರ್ವಜನಿಕರು ಸಹಕಾರ ನೀಡಬೇಕು ಎಂದು ಮನವಿ ಮಾಡಿದ್ದಾರೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ೩೦ ಸಾವಿರದ ೬೮೫ ಅರ್ಜಿಗಳನ್ನು ನಮೂದು ಮಾಡಲಾಗಿದೆ. ಈ ಪೈಕಿ ೧೧ ಸಾವಿರದ ೯೬ ಅರ್ಜಿಗಳನ್ನು ಸರ್ಕಾರ ನಿಗದಿಪಡಿಸಿರುವ ತಂತ್ರಾಂಶಗಳ ಮೂಲಕ ಗ್ರಾಮ ಆಡಳಿತಾಧಿಕಾರಿಗಳ ಹಂತದಲ್ಲಿ ಸಂಬಂಧಪಟ್ಟ ದಾಖಲೆಗಳನ್ನು ಅಪ್‌ಲೋಡ್ ಮಾಡಲಾಗಿದೆ. ಇವುಗಳಲ್ಲಿ ೮ ಸಾವಿರದ ೩೮೯ ಅರ್ಜಿಗಳನ್ನು ತಹಸೀಲ್ದಾರರ ಹಂತದಲ್ಲಿ ಇತ್ಯರ್ಥಪಡಿಸಲಾಗಿದೆ. ಉಳಿದ ೨೪ ಸಾವಿರದ ೬೩೯ ಫಲಾನುಭವಿಗಳನ್ನು ಗುರುತಿಸಿ ಸರ್ವೆ ಇಲಾಖೆಗೆ ಪೋಡಿ ಕಾರ್ಯಕ್ಕೆ ಕಳುಹಿಸಲಾಗಿದೆ ಎಂದು ಜಿಲ್ಲಾಧಿಕಾರಿ ಮಾಹಿತಿ ನೀಡಿದ್ದಾರೆ.

*****************

ಬೆಂಗಳೂರು ಆಕಾಶವಾಣಿಯಲ್ಲಿ ಸೇವೆ ಸಲ್ಲಿಸುತ್ತಿದ್ದ ಸಿಬ್ಬಂದಿಗಳು ಸುಧೀರ್ಘ ಸೇವೆ ನಂತರ ಇಂದು ನಿವೃತ್ತರಾಗುತ್ತಿದ್ದಾರೆ. ಉದ್ಘೋಷಕಿಯಾಗಿ ಹಾಸನ, ಮೈಸೂರು, ಬೆಂಗಳೂರು ಆಕಾಶವಾಣಿಯಲ್ಲಿ ಸೇವೆ ಸಲ್ಲಿಸಿರುವ ಎಂ.ಎಸ್.ಅನುಪಮ ಇಂದು ನಿವೃತ್ತಿ ಹೊಂದುತ್ತಿದ್ದಾರೆ.
ಶ್ರೀನಗರ ಹಾಗೂ ಬೆಂಗಳೂರಿನಲ್ಲಿ ಉದ್ಘೋಷಕಿಯಾಗಿ ಸೇವೆ ಸಲ್ಲಿಸಿರುವ ಕಾಶ್ಮೀರ ಮೂಲದ ಹುಮೈರಾ ತಬಸುಂ ಹಾಗೂ ಇಂಜಿನಿಯರ್ ಸಹಾಯಕರಾಗಿ ಸೇವೆ ಸಲ್ಲಿಸಿದ ಎಂ.ಮಾಧವ ಅವರು ಇಂದು ನಿವೃತ್ತಿಯಾಗಲಿದ್ದಾರೆ.

*****************

ದೇಶಾದ್ಯಂತ ರಾಷ್ಟ್ರೀಯ ಪರೀಕ್ಷಾ ಸಂಸ್ಥೆಯ ವತಿಯಿಂದ ೨೦೨೫ರ ನೀಟ್ ಪರೀಕ್ಷೆಯು ಮೇ ೪ ರಂದು ಮಧ್ಯಾಹ್ನ ೨.೦೦ ಗಂಟೆಯಿಂದ ಸಂಜೆ ೫.೦೦ ಗಂಟೆಯವರೆಗೆ ನಡೆಯಲಿದೆ.
ರಾಜ್ಯದಲ್ಲಿ ಒಟ್ಟು ೩೮೧ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು, ೧ ಲಕ್ಷದ ೪೯ ಸಾವಿರ ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಲಿದ್ದಾರೆ.

*********ಮುಕ್ತಾಯ********